ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 16–06–2017

## ಪತ್ರಿಕಾ ಆಮಂತ್ರಣ

**1** Opening Ceremony of 2nd Phase Oorja CAPES Youth Under 19 Football Talent Hunt Tournament (Boys &Girls)

Chief Guest:

Dr. G. Parameshwara,
Home Minister,

Date: 17-06-2017 Saturday Time : 2.00 PM

Place: Sree Kanteerava Stadium, Bengaluru.

**ವಿಧಾನ ಪರಿಷತ್ತಿನಲ್ಲಿ ಇಂದು:**

## ನರೇಗಾ ಯೋಜನೆ ಅನುಷ್ಠಾನಕ್ಕೆ ರಾಜ್ಯಕ್ಕೆ ರಾಷ್ಟ್ರೀಯ ಪುರಸ್ಕಾರ

**ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)**

ಕೇಂದ್ರ ಸರ್ಕಾರದ ಯಾವುದೇ ಅನುದಾನ ದುರುಪಯೋಗವಾಗದೆ, ಸರಕಾರದ ಯೋಜನೆಗಳ ಅನುಷ್ಠಾನವು ಕುಂಠಿತವಾಗದಂತೆ ಮತ್ತು ಅನುದಾನವನ್ನು ಸಂಪೂರ್ಣವಾಗಿ ವಿನಿಯೋಗಿಸಲು ರಾಜ್ಯ ಸರ್ಕಾರವು ಕ್ರಮವಹಿಸಿ ಯೋಜನೆಗಳಲ್ಲಿ ಗರಿಷ್ಠ ಪ್ರಮಾಣದ ಗುರಿಗಳನ್ನು ಸಾಧಿಸಿವೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಎಚ್. ಕೆ. ಪಾಟೀಲ್ ತಿಳಿಸಿದ್ದಾರೆ.

ಇಂದು ಕೋಟ ಶ್ರೀನಿವಾಸ ಪೂಜಾರಿ ಅವರ ಪ್ರಶ್ನೆಗೆ ಉತ್ತರಿಸುತ್ತಾ, ಹಲವಾರು ಯೋಜನೆಗಳಲ್ಲಿ ವಿಶೇಷ ಪ್ರಗತಿಯನ್ನು ದಾಖಲಿಸಿ ರಾಷ್ಟ್ರಮಟ್ಟದಲ್ಲಿ ಪ್ರಶಂಸೆಗೆ ಪಾತ್ರವಾಗಿರುವುದರ ಜೊತೆಗೆ ಹಲವಾರು ಪುರಸ್ಕಾಗಳನ್ನು ಪಡೆದಿರುತ್ತದೆ ಎಂದು ಸಚಿವರು ಸದನಕ್ಕೆ ತಿಳಿಸಿದರು.

ಎನ್.ಆರ್. ಎಲ್.ಎಂ. ಯೋಜನಾ ಅನುಷ್ಠಾನಕ್ಕಾಗಿ ಪ್ರಸ್ತುತ ಎಸ್‌ಎಚ್‌ಜಿ ಬ್ಯಾಂಕ್ ಲಿಂಕೇಜ್ ರಾಷ್ಟ್ರೀಯ ಪುರಸ್ಕಾರವನ್ನು ಹಾಗೂ ಪಿಎಂಜಿಎಸ್‌ವೈ ಯೋಜನಾ ಅನುಷ್ಠಾನಕ್ಕಾಗಿ effective Initiatives in Rural Development ರಾಷ್ಟ್ರೀಯ ಪುರಸ್ಕಾರವನ್ನು ರಾಜ್ಯ ಸರ್ಕಾರವು ಪಡೆದಿರುತ್ತದೆ.

ಎಸ್‌ಎಂ:ಕೆಎನ್‌ವಿ:ಜೆಡಿ:ಜಿಪಿಆರ್

## 12343.01 ಕಿ.ಮೀ ನಮ್ಮ ಗ್ರಾಮ ನಮ್ಮ ರಸ್ತೆ ಅಭಿವೃದ್ಧಿ

**ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)**

ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ 1, 2 ಮತ್ತು 3 ರಡಿ ಒಟ್ಟು 12343.01 ಕಿ.ಮೀ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಎಚ್. ಕೆ. ಪಾಟೀಲ್ ಅವರು ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಮಾತನಾಡುತ್ತಾ ಈ ಪೈಕಿ ರಸ್ತೆಗಳ ನಿರ್ಮಾಣ ಪೂರ್ಣಗೊಂಡು 2ನೇ ವರ್ಷದಿಂದ 5ನೇ ವರ್ಷದ ನಿರ್ವಹಣೆ ಹಂತದಲ್ಲಿರುವ ಕಾಮಗಾರಿಗಳಲ್ಲಿ ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯಡಿ ದುರಸ್ತಿ ರಸ್ತೆಗಳನ್ನು ನಿರ್ವಹಣೆಮಾಡಿ ಸುಸ್ಥಿತಿಯಲ್ಲಿಡಲಾಗಿದೆ ಎಂದು ಸಚಿವರು ಸದನಕ್ಕೆ ತಿಳಿಸಿದರು.

ಎಸ್‌ಎಂ:ಕೆಎನ್‌ವಿ:ಜೆಡಿ:ಜಿಪಿಆರ್

## ರಾಜ್ಯದಲ್ಲಿ ಲಲಿತಕಲೆಗೆ ಸಂಬಂಧಪಟ್ಟ ಪ್ರತ್ಯೇಕ ವಿಶ್ವವಿದ್ಯಾಲಯ

**ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)**

**ರಾಜ್ಯದಲ್ಲಿ** ಲಲಿತಕಲೆಗೆ ಸಂಬಂಧಪಟ್ಟ ಪ್ರತ್ಯೇಕ ವಿಶ್ವವಿದ್ಯಾಲಯ ಇಲ್ಲದಿರುವುದನ್ನು ಮನಗಂಡಂತಹ ಸರ್ಕಾರ ಲಲಿತಕಲೆಯನ್ನು ಉಳಿಸಿ, ಬೆಳೆಸುವ ಉದ್ದೇಶದಿಂದ ಲಲಿತಕಲಾ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ನಿರ್ಣಯಿಸಿರುತ್ತದೆ ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜರಾಯ ರೆಡ್ಡಿ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ನಿರಾಣಿ ಹಣಮಂತ್ ರುದ್ರಪ್ಪ ಅವರ ಪ್ರಶ್ನೆಗೆ ಉತ್ತರಿಸುತ್ತಾ ಪ್ರಸ್ತುತ ವಿಶ್ವ ವಿದ್ಯಾಲಯದ ಪ್ರಾರಂಭಿಕ ಕಾರ್ಯಗಳನ್ನು ಬೆಂಗಳೂರಿನ ಕರ್ನಾಟಕ ರಾಜ್ಯ ಕೊಳಚೆ ನಿರ್ಮೂಲನಾ ಮಂಡಳಿಯ ಕಟ್ಟಡದಲ್ಲಿನ ತಾತ್ಕಾಲಿಕ ಕಚೇರಿಯಲ್ಲಿ ನಿರ್ವಹಿಸಲಾಗುತ್ತಿದೆ. ಈಗ ಅಗತ್ಯ ಜಮೀನು ಲಭ್ಯವಿರುವುದರಿಂದ, ಜಮೀನನ್ನು ಉನ್ನತ ಶಿಕ್ಷಣ ಇಲಾಖೆಯ ವಶಕ್ಕೆ ಪಡೆದ ನಂತರ ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಬ್ಯಾಡ ಗ್ರಾಮದಲ್ಲಿ ಲಲಿತಕಲಾ ವಿಶ್ವವಿದ್ಯಾಲಯವನ್ನು ಪೂರ್ಣ ಪ್ರಮಾಣದಲ್ಲಿ ಸ್ಥಾಪಿಸಲು ಕ್ರಮವಹಿಸಲಾಗುವುದು ಎಂದು ಸದನಕ್ಕೆ ತಿಳಿಸಿದರು.

ಎಸ್‌ಎಂ:ಕೆಎನ್‌ವಿ:ಜೆಡಿ:ಜಿಪಿಆರ್

## ಪತ್ರಿಕಾ ಪ್ರಕಟಣೆ

## ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿಗಳಿಗೆ ಮತ್ತು ಸಂಸ್ಥೆಗಳಿಗೆ ರಾಜ್ಯ ಪ್ರಶಸ್ತಿ ನೀಡಲು ನಾಮನಿರ್ದೇಶನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರವು ಮಕ್ಕಳ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವಂತಹ ವ್ಯಕ್ತಿಗಳಿಗೆ ತಲಾ ರೂ 25,000/- ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ ತಲಾ ರೂ. 1.00 ಲಕ್ಷಗಳ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ಮಕ್ಕಳ ದಿನಾಚರಣೆಯಂದು ಪ್ರದಾನ ಮಾಡಿ ಗೌರವಿಸುತ್ತದೆ.

2017ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರಿಂದ ಪಡೆದು ಭರ್ತಿಮಾಡಿದ ಅರ್ಜಿಗಳನ್ನು ದ್ವಿಪ್ರತಿಯಲ್ಲಿ ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಗೆ ದಿನಾಂಕ: 31-08-2017 ರೊಳಗೆ ಸಲ್ಲಿತಕ್ಕದ್ದು. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಕನ್ನಡ ಭಾಷೆಯಲ್ಲೇ ಸಲ್ಲಿಸಬೇಕು.

ಎಸ್‌ಎಂ:ಕೆಎನ್‌ವಿ:ಜೆಡಿ:ಜಿಪಿಆರ್

## "ವೈಲ್ಡ್‌ವೆದರ್ : ವೆಟ್" ಚಲನಚಿತ್ರ ಪ್ರದರ್ಶನ

ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)

ಜವಾಹರ್‌ಲಾಲ್ ನೆಹರು ತಾರಾಲಯ ಹಾಗೂ ಬೆಂಗಳೂರು ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಷನ್ ಸಹಯೋಗದಲ್ಲಿ ಜೂನ್ 18 ರ ಭಾನುವಾರದಂದು ಸಂಜೆ 5-00 ಗಂಟೆಗೆ ನಗರದ ಹೈಗ್ರೌಂಡ್ಸ್‌ನ ಶ್ರೀ ಟಿ. ಚೌಡಯ್ಯ ರಸ್ತೆಯಲ್ಲಿರುವ ಜವಾಹರ್‌ಲಾಲ್ ನೆಹರು ತಾರಾಲಯದಲ್ಲಿ ಈ ತಿಂಗಳ ಚಲನಚಿತ್ರ "ವೈಲ್ಡ್‌ವೆದರ್ : ವೆಟ್" ಪ್ರದರ್ಶನವನ್ನು ವನ್ನು ಹಮ್ಮಿಕೊಂಡಿದೆ. ಈ ಚಲನಚಿತ್ರವು 60 ನಿಮಿಷಗಳದಾಗಿದ್ದು ಹತ್ತು ವರ್ಷ ಹಾಗೂ ಮೇಲ್ಪಟ್ಟವರಿಗೆ ಮಾತ್ರ ಚಲನಚಿತ್ರ ನೋಡಲು ಅರ್ಹತೆ ಹೊಂದಿರುತ್ತಾರೆ.

ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ - 2237 9725 ಅಥವಾ http://www.taralaya.org/monthly-movie.php ಸಂಪರ್ಕಿಸಬಹುದಾಗಿದೆ.

ಎಸ್‌ಎಂ:ಕೆಎನ್‌ವಿ:ಜೆಡಿ:ಜಿಪಿಆರ್

## ಯೋಗಥಾನ್ (ಯೋಗ ನಡಿಗೆ) ರಾಜ್ಯಪಾಲರಿಂದ ಚಾಲನೆ

ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಆಯುಷ್ ಸೇವೆಗಳ ಇಲಾಖೆವತಿಯಿಂದ ಆಯೋಜಿಸುತ್ತಿರುವ 3ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಪೂರ್ವಭಾವಿ ಕಾರ್ಯಕ್ರಮವಾಗಿ ಯೋಗಥಾನ್ ಅನ್ನು ಜೂನ್ 18 ರ ಭಾನುವಾರ ಬೆಳಿಗ್ಗೆ 7.30 ಗಂಟೆಗೆ (ಯೋಗ ನಡಿಗೆ) ರಾಜಭವನದಿಂದ ವಿಧಾನಸೌಧದ ಗಾಂಧಿ ಪ್ರತಿಮೆವರೆಗೆ ನಡೆಯಲಿದೆ.

ಗೌರವಾನ್ವಿತ ರಾಜ್ಯಪಾಲ ವಜುಭಾಯಿ ರೂಡಾಭಾಯಿ ವಾಲಾ ಅವರು ಅಂದು ಬೆಳಿಗ್ಗೆ 7.30 ಗಂಟೆಗೆ ರಾಜಭವನದ ಮುಖ್ಯದ್ವಾರದಲ್ಲಿ ಯೋಗಥಾನ್‌ಗೆ ಚಾಲನೆ ನೀಡಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ.ಆರ್. ರಮೇಶ್ ಕುಮಾರ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಎಸ್‌ಎಂ:ಕೆಎನ್‌ವಿ:ಜೆಡಿ:ಜಿಪಿಆರ್

## ಗಿನ್ನಿಸ್ ದಾಖಲೆ ನಿರ್ಮಿಸುವ ನಿಟ್ಟಿನಲ್ಲಿ
## ಸಾಮೂಹಿಕ ಶೀರ್ಷಾಸನ

ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಆಯುಷ್ ಸೇವೆಗಳ ಇಲಾಖೆ ಹಾಗೂ ಯೋಗ ಗಂಗೋತ್ರಿ ಟ್ರಸ್ಟ್, ಬೆಂಗಳೂರು ಇವರ ಸಹಯೋಗದಲ್ಲಿ 3ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಪೂರ್ವಭಾವಿ ಕಾರ್ಯಕ್ರಮವಾಗಿ ಗಿನ್ನಿಸ್ ದಾಖಲೆ ನಿರ್ಮಿಸುವ ನಿಟ್ಟಿನಲ್ಲಿ ಸಾಮೂಹಿಕ ಶೀರ್ಷಾಸನವನ್ನು ಜೂನ್ 18 ರ ಭಾನುವಾರ ಬೆಳಿಗ್ಗೆ 8.00 ಗಂಟೆಗೆ ವಿಧಾನಸೌಧ ಆವರಣ, ಹೈಕೋರ್ಟ್ ಕಡೆ, ಬೆಂಗಳೂರು ಇಲ್ಲಿ ಹಮ್ಮಿಕೊಂಡಿದೆ.

ಈ ಸಮಾರಂಭದ ಉದ್ಘಾಟನೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ.ಆರ್. ರಮೇಶ್ ಕುಮಾರ್ ಅವರು ಉದ್ಘಾಟಿಸಲಿದ್ದಾರೆ.

ಸಮಾರಂಭದ ಅಧ್ಯಕ್ಷತೆಯನ್ನು ನಗರಾಭಿವೃದ್ಧಿ ಹಾಗೂ ಹಜ್ ಸಚಿವ ರೋಷನ್ ಬೇಗ್ ಅವರು ವಹಿಸಲಿದ್ದಾರೆ.

ಕೇಂದ್ರದ ಸಾಂಖ್ಯಿಕ ಮತ್ತು ಯೋಜನಾ ಅನುಷ್ಠಾನ ಸಚಿವ ಡಿ.ವಿ. ಸದಾನಂದ ಗೌಡ, ವಿಧಾನ ಪರಿಷತ್ತಿನ ಸಭಾಪತಿ ಡಿ. ಹೆಚ್. ಶಂಕರಮೂರ್ತಿ, ವಿಧಾನಸಭೆಯ ಸಭಾಧ್ಯಕ್ಷ ಕೆ.ಬಿ. ಕೋಳಿವಾಡ್, ಬೆಂಗಳೂರು ನಗರ ಮೂಲಕ ಸೌಕರ್ಯ ಅಭಿವೃದ್ಧಿ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಕೆ.ಜೆ. ಜಾರ್ಜ್, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ ಹಾಗೂ ಯುವ ಸಬಲೀಕರಣ, ಕ್ರೀಡೆ ಮತ್ತು ಮೀನುಗಾರಿಕೆ ಸಚಿವ ಪ್ರಮೋದ್ ಮಧ್ವರಾಜ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

**ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಮಹೇಂದ್ರ ಜೈನ್ ಅವರಿಂದ ಐದು ನಿಮಿಷಗಳ ಶೀರ್ಷಾಸನ ಪ್ರದರ್ಶನ ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿದೆ.**

ಎಸ್ಎಂ:ಕೆಎನ್ವಿ:ಜೆಡಿ:ಜಿಪಿಆರ್